**<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ</u>**

**<u>ಸಿ.ಸಿ.ನಂ.32/2017</u>**

ಫಿರ್ಯಾದಿಃ ಕರ್ನಾಟಕ ಸರ್ಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ಧ ಃಃ-

ಆರೋಪಿಃ ಬಸಪ್ಪ ತಂದೆ ಮಾಳಪ್ಪ ಬಾದೆಪೂರ,
ವಃ 42 ವರ್ಷ, ಉಃ ಡ್ರೈವರ ಕೆಲಸ,
ಸಾಃ ಹೊಸಕೇರಿ, ತಾಃ ಶಹಾಪುರ, ಜಿಃ ಯಾದಗಿರಿ.

-----

**<u>ಆ ಪಾ ದ ನೆ</u>**

ಅಭಿಯೋಜನೆಯವರು ನಿನ್ನ ಮೇಲೆ ಹೊರಿಸಿರುವ ಆರೋಪವೇನೆಂದರೆ, ದಿನಾಂಕ 28-11-2016 ರಂದು ರಾತ್ರಿ 8.30 ಗಂಟೆ ಸುಮಾರಿಗೆ ಸೇಡಂ ಪೊಲೀಸ್ ಠಾಣಾ ವ್ಯಾಪ್ತಿಯ ಹಂದ್ರಕಿ ಗ್ರಾಮದ ಸೀಮಾಂತರದಲ್ಲಿ ನೀನು ನಿನ್ನ ವಶದಲ್ಲಿದ್ದ ಟಿಪ್ಪರ ನಂ.ಕೆಎ-32/ಸಿ-5379 ನೇದ್ದನ್ನು ಸಾರ್ವಜನಿಕ ರಸ್ತೆಯ ಮೇಲೆ ಮಾನವನ ಜೀವಕ್ಕೆ ಹಾನಿಯಾಗುವ ರೀತಿಯಲ್ಲಿ ಅತಿವೇಗ ಹಾಗೂ ನಿಷ್ಕಾಳಜಿತನದಿಂದ ಚಲಾಯಿಸಿದ್ದು, ಕಾರಣ ನೀವು ಭಾ.ದಂ.ಸಂ. ಕಲಂ. 279 ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಮೇಲೆ ಹೇಳಿರುವ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ನೀನು ನಿನ್ನ ವಶದಲ್ಲಿದ್ದ ಟಿಪ್ಪರ ನಂ.ಕೆಎ-32/ಸಿ-5379 ನೇದ್ದನ್ನು ಚಲಾಯಿಸಿಕೊಂಡು ಹೋಗಿ, ಎದುರಿನಿಂದ ಬರುತ್ತಿದ್ದ ಮೋಟಾರ್ ಸೈಕಲ್ ನಂ.ಕೆಎ-33/ಜೆ-2042 ನೇದ್ದಕ್ಕೆ ಡಿಕ್ಕಿ ಪಡಿಸಿದ್ದರಿಂದ ಮೋಟಾರ್ ಸೈಕಲ್ ಸವಾರ ಯಲ್ಲಪ್ಪನಿಗೆ ತಲೆಗೆ ಹಿಂದುಗಡೆ ಭಾರಿ ಗಾಯಗಳಾಗಿ ಸ್ಥಳದಲ್ಲಿಯೇ ಮೃತಪಟ್ಟಿದ್ದರಿಂದ, ಕಾರಣ ನೀನು ಭಾ.ದಂ.ಸಂ. ಕಲಂ 304(ಎ) ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಮೇಲೆ ಹೇಳಿರುವ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತನಾದ ನೀನು ಅಪಘಾತ ಪಡಿಸಿದ ನಂತರ ಗಾಯಾಳುವಿಗೆ ಪ್ರಥಮ ಚಿಕಿತ್ಸೆ ಕೊಡಿಸದೆ ಘಟನಾ ಸ್ಥಳದಲ್ಲಿಯೇ ಬಿಟ್ಟು ಓಡಿಹೋಗಿದ್ದು, ಕಾರಣ ನೀನು ಮೋಟಾರು ವಾಹನ ಕಾಯ್ದೆ ಕಲಂ 187 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

(ಆರೋಪಣೆಯನ್ನು ಆರೋಪಿತರಿಗೆ ಗೊತ್ತಿದ್ದ ಭಾಷೆಯಲ್ಲಿ ಓದಿ ಹೇಳಿ ತಿಳಿಸಿದ ನಂತರ ಅವರ ಹೇಳಿಕೆಯನ್ನು ಪಡೆದು ನಮೂದಿಸಿದ್ದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣಿಕರಿಸುತ್ತೇನೆ.)

ಸಹಿ/-

ದಿನಾಂಕ 02-08-2021 ಪ್ರ.ದ.ನ್ಯಾ.ದಂ. ಸೇಡಂ.